# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 732 (945)

**ಸದಸ್ಯರ ಹೆಸರು** : ಡಾ: ಆರತಿ ಕೃಷ್ಣ
(ನಾಮನಿರ್ದೇಶನ ಹೊಂದಿದವರು)

**ಉತ್ತರಿಸುವ ದಿನಾಂಕ** : 15.12.2025

**ಉತ್ತರಿಸುವವರು** : ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲ್ಲೂಕು ಹಾಗೂ ಮೂಡಿಗೆರೆ ತಾಲ್ಲೂಕು ವ್ಯಾಪ್ತಿಯಲ್ಲಿ ವಿಪರೀತವಾಗಿ ಕಾಡಾನೆ ಹಾಗೂ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಿದ್ದು, ಇದರಿಂದ ರೈತರುಗಳ ಕೃಷಿ ಕಾರ್ಮಿಕರ ಜೀವನಕ್ಕೆ ಹಾನಿಯಾಗುತ್ತಿರುವುದಲ್ಲದೆ ಅವರುಗಳು ಬೆಳೆದ ಬೆಳೆಯನ್ನು ಸಹ ನಾಶಪಡಿಸಿದ್ದು, ವನ್ಯಜೀವಿ ಸಂಘರ್ಷ ತಡೆಯಲು ತುರ್ತಾಗಿ ಕಾಡಂಚಿನ ಸುತ್ತಲೂ ಆನೆ ಕಾರಿಡಾರ್ ಹಾಗೂ ಕಾಡಾನೆಗಳನ್ನು ತುರ್ತಾಗಿ ಸೆರೆ ಹಿಡಿಯಲು ಅನುವಾಗುವಂತೆ ದುಬಾರೆ ಆನೆ ಶಿಬಿರದಂತಹ ಆನೆಗಳ ತರಬೇತಿ ಶಿಬಿರವನ್ನು ಸ್ಥಾಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೆ? | ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಾನವ-ಆನೆ ಸಂಘರ್ಷವನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>**ಭೌತಿಕ ಅಡೆತಡೆಗಳ ನಿರ್ಮಾಣ:**<br>• ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.<br><br>**ಆನೆ ಕಾರ್ಯಪಡೆಗಳ ಸ್ಥಾಪನೆ:**<br>• ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಆನೆ ಕಾರ್ಯಪಡೆ (Elephant Task Force) ನ್ನು ರಚಿಸಲಾಗಿರುತ್ತದೆ. ಸದರಿ ತಂಡಗಳು ಸಂಘರ್ಷದ ಪ್ರಕರಣಗಳಿಗೆ ತ್ವರಿತ ಪ್ರತಿಕ್ರಿಯೆ ನೀಡಿ ಆನೆ ಹಿಮ್ಮೆಟ್ಟಿಸುವ ಕಾರ್ಯವನ್ನುಕೈಗೊಳ್ಳಲಾಗುತ್ತಿದೆ. ಮುಂದುವರೆದು, ಆನೆ ಕಾರ್ಯಪಡೆ (ETF) 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.<br><br>**ಆವಾಸ ಸ್ಥಾನ ಅಭಿವೃದ್ಧಿ:**<br>• ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ) | | **ತ್ವರಿತ ಕಾರ್ಯಾಚರಣೆ:**<br>• ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.<br>• ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.<br>• ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.<br>• ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.<br>• ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.<br>• ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ.<br>• ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.<br><br>**ತಂತ್ರಜ್ಞಾನ ಬಳಕೆ:**<br>• ವಿವಿಧ ವಿಭಾಗಗಳಿಂದ ಲಭ್ಯವಾಗುವ ಮಾಹಿತಿಯನ್ನು ರಿಯಲ್-ಟೈಮ್‌ನಲ್ಲಿ ಸಂಗ್ರಹಿಸಿ, ವಿಶ್ಲೇಷಿಸಿ, ಸೂಕ್ತ ನಿರ್ಧಾರಗಳನ್ನು ಕೈಗೊಳ್ಳಲು ಹಾಗೂ ಕ್ಷೇತ್ರ ಮಟ್ಟದ ಚಟುವಟಿಕೆಗಳನ್ನು ಸಮನ್ವಯಗೊಳಿಸಿ, ತುರ್ತು ಘಟನೆಗಳಿಗೆ ತಕ್ಷಣ ಪ್ರತಿಕ್ರಿಯಿಸಲು ಕೇಂದ್ರ ಸ್ಥಾನದಲ್ಲಿ ಸಂಯೋಜಿತ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್ (ICCC) ಹಾಗೂ 11 ವಿಭಾಗಗಳಲ್ಲಿ ವಿಭಾಗೀಯ ಕಮಾಂಡ್ ಅಂಡ್ ಕಂಟ್ರೋಲ್ ಸೆಂಟರ್ (DCCC) ಸ್ಥಾಪಿಸಲಾಗುತ್ತಿದೆ.<br>• ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆ, ಹುಲಿ, ಚಿರತೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ "ಹೆಜ್ಜೆ" ಎಂಬ ಡ್ಯಾಶ್ ಬೋರ್ಡ್ ನ್ನು ತಯಾರಿಸಲಾಗಿದೆ. |

| ಕ್ರ, ಸಂ | ಪ್ರಶ್ನೆ | ಉತ್ತರ |
| --- | --- | --- |
| ಇ) | | • ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು Advance alert system ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.<br>• ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ "AI" Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br><br>ಅಲ್ಲದೇ, ಸಂಘರ್ಷಕ್ಕೆ ಕಾರಣವಾಗಿರುವ ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರಿಸುವುದು ನಿಯಂತ್ರಣದ ಒಂದು ಕ್ರಮವಾಗಿರುತ್ತದೆ, ಸದರಿ ಕಾರ್ಯಾಚರಣೆಗಾಗಿ ಚಿಕ್ಕಮಗಳೂರು ಜಿಲ್ಲೆಯ ಸಮೀಪದಲ್ಲಿರುವ ಸಕ್ರೆಬೈಲು ಆನೆ ಶಿಬಿರದಿಂದ ಹಾಗೂ ದುಬಾರೆ ಆನೆ ಶಿಬಿರದಿಂದ ಕುಮ್ಕಿ ಆನೆಗಳನ್ನು ನಿಯೋಜಿಸಲಾಗುತ್ತಿದೆ. |

**ಸಂಖ್ಯೆ: ಅಪಜೀ 348 ಎಫ್‌ಡಬ್ಲ್ಯೂಎಲ್ 2025**

**(ಈಶ್ವರ ಬಿ.ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು